## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಂ.ವಿ. ಕೃಷ್ಣಮೂರ್ತಿ, ಸಹಾಯಕ ಕೃಷಿ ಅಧಿಕಾರಿ ಇವರ ವಿರುದ್ಧ ಲೋಕಾಯುಕ್ತರು ತನಿಖೆ ನಡೆಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:-**

1. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂ. COMPT/UPLOK/MYS/1752/2012/ARE-11, ದಿ: 20-09-2012.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಪತ್ರದಲ್ಲಿ ಶ್ರೀ ಎಂ.ವಿ. ಕೃಷ್ಣಮೂರ್ತಿ, ಸಹಾಯಕ ಕೃಷಿ ಅಧಿಕಾರಿ(ನಿವೃತ್ತ) ಇವರು ಜಲಾನಯನ ಅಭಿವೃದ್ಧಿ ಇಲಾಖೆ, ಮದ್ದೂರು, ಮಂಡ್ಯ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಶ್ರೀ ಹೆಚ್. ಎಂ. ಮರಿಸ್ವಾಮಿ ಬಿನ್ ಲೇ॥ ಮರಯ್ಯ, ಎಸ್.ಐ.ಹೊನ್ನಲಗೆರೆ ಗ್ರಾಮ, ಮಂಡ್ಯ, ಇವರು ಮತ್ತು ಇತರೆ 7 ಜನರು ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಎಸ್.ಐ.ಹೊನ್ನಲಗೆರೆ ಗ್ರಾಮಪಂಚಾಯ್ತಿ ವತಿಯಿಂದ ಜಮೀನು ಮಟ್ಟ ಮಾಡುವ ಕಾಮಗಾರಿಯನ್ನು ಪರಿಶೀಲನೆ ಮಾಡಿ ದಿನಾಂಕ: 22-06-2011 ರಂದು ಕಾಮಗಾರಿಯ ಅಂದಾಜು ಪಟ್ಟಿಯನ್ನು ತಯಾರಿಸಲು ಶ್ರೀ ಕೃಷ್ಣಮೂರ್ತಿರವರು ಫಿರ್ಯಾಧಿಯವರಿಂದ 1,600/- ರೂಪಾಯಿ ಲಂಚದ ಹಣವನ್ನು ಒತ್ತಾಯ ಪೂರ್ವಕವಾಗಿ ಪಡೆದು, ಉಳಿದ ಹಣ ರೂ. 6,000/-ಗಳನ್ನು ದಿನಾಂಕ: 14-07-2011 ರಂದು ತೆಗೆದುಕೊಳ್ಳುವಾಗ ಲೋಕಾಯುಕ್ತರಿಗೆ ಸಿಕ್ಕಿ ಬಿದ್ದ ಆರೋಪ ಸಾಬೀತಾಗಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆ 12(4) 1984 ಮತ್ತು ಕೆಸಿಎಸ್ ಸಿಸಿಎ ನಿಯಮ 14 ಎ ಪ್ರಕಾರ ಸದರಿ ಅಧಿಕಾರಿಯವರ ವಿರುದ್ಧ ತನಿಖೆ ನಡೆಸಲು, ಇವರು ನಿವೃತ್ತರಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 214(2)(ಬಿ)(1) ಪ್ರಕಾರ ಅನುಮತಿ ನೀಡುವಂತೆ ಉಪ ಲೋಕಾಯುಕ್ತರು ಕೋರಿರುತ್ತಾರೆ.

ಮಾನ್ಯ ಲೋಕಾಯುಕ್ತರು ಕೋರಿರುವ ಪ್ರಕಾರ ಶ್ರೀ ಎಂ.ವಿ. ಕೃಷ್ಣಮೂರ್ತಿ, ಸಹಾಯಕ ಕೃಷಿ ಅಧಿಕಾರಿ(ನಿವೃತ್ತ) ಇವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ಪ್ರಕಾರ ತಪ್ಪೆಸಗಿದ್ದಾರೆಂದು ಮೇಲು ನೋಟಕ್ಕೆ (prima-facie) ಕಂಡು ಬಂದಿದ್ದರಿಂದ, ಅವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ಪ್ರಕಾರ ಶಿಸ್ತು ಕ್ರಮ ಕೈಗೊಳ್ಳಲು ಪ್ರಕರಣವನ್ನು **ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮ 14-ಎ ಯನ್ನು ಓದುವುದರ ಜೊತೆ, ಸದರಿ ಅಧಿಕಾರಿಗಳು ಸೇವೆಯಿಂದ ನಿವೃತ್ತರಾಗಿರುವುದರಿಂದ ಅವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಕರ್ನಾಟಕ**

--2--

33

ನಾಗರಿಕ ಸೇವಾ ನಿಯಮಾವಳಿ ನಿಯಮ 214(2) (ಬಿ)(1)ರಡಿ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 70 ಕೃಪವಿ 2012.**
**ಬೆಂಗಳೂರು, ದಿನಾಂಕ: 03-12-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಎಂ.ವಿ. ಕೃಷ್ಣಮೂರ್ತಿ, ಸಹಾಯಕ ಕೃಷಿ ಅಧಿಕಾರಿ(ನಿವೃತ್ತ) ಇವರು ಸೇವೆಯಲ್ಲಿರುವಾಗ ಶ್ರೀ ಹೆಚ್. ಎಂ. ಮರಿಸ್ವಾಮಿ ಬಿನ್ ಲೇ॥ ಮರಯ್ಯ, ಎಸ್.ಐ.ಹೊನ್ನಲಗೆರೆ ಗ್ರಾಮ, ಮಂಡ್ಯ ಜಿಲ್ಲೆ, ಇವರು ಮತ್ತು ಇತರೆ 7 ಜನರಿಂದ ಲಂಚ ತೆಗೆದುಕೊಳ್ಳುವಾಗ ಲೋಕಾಯುಕ್ತರಿಗೆ ಸಿಕ್ಕಿ ಬಿದ್ದ ಆರೋಪಕ್ಕೆ ಸಂಬಂಧಿಸಿದಂತೆ, ಅವರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ಸಿ.ಸಿ.ಎ.) ನಿಯಮಾವಳಿ 1957ರಡಿ ಇಲಾಖಾ ವಿಚಾರಣಾ ಕ್ರಮವನ್ನು ಆಯೋಜಿಸಲು ಅದೇ ನಿಯಮಾವಳಿ ನಿಯಮ 14(ಎ) ಯನ್ನು ಓದುವುದರ ಜೊತೆಗೆ ಸದರಿ ಅಧಿಕಾರಿಗಳು ನಿವೃತ್ತರಾಗಿರುವುದರಿಂದ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿ ನಿಯಮ 214(2) (ಬಿ)(1)ರಡಿ ಸದರಿ ಪ್ರಕರಣವನ್ನು ಕರ್ನಾಟಕ ಉಪ-ಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿ, ಮಂಡ್ಯ.
5. ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಪಾಂಡವಪುರ, ಮಂಡ್ಯ ಜಿಲ್ಲೆ.
6. ಸಂಬಂಧಪಟ್ಟ ಅಧಿಕಾರಿಯವರಿಗೆ (ಕೃಷಿ ಆಯುಕ್ತರ ಮೂಲಕ)
7. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ, ಅವರ ಆಪ್ತ ಸಹಾಯಕರಿಗೆ,
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.